**2 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಿಹರ**

**ಸಿ ಸಿ ನಂ. 2784/2022**

| | | |
|---|---|---|
| ಹೆಸರು | ರವಿ ಎಲ್ ಡಿ | PW -11 |
| ತಂದೆಯ ಹೆಸರು | ವೆಂಕಪ್ಪ ರೆಡ್ಡಿ | CW -14 |
| ವಯಸ್ಸು | 53 ವರ್ಷ | |
| ಉದ್ಯೋಗ | ವ್ಯವಸಾಯ | ದಿನಾಂಕಃ 21.02.2025 |
| ವಾಸ | ಹರಿಹರ | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ ಸಸಅ ರವರಿಂದ ಃ**

ಚಾಸಾ.1 ರವರ ಪರಿಚಯವಿಲ್ಲ. ಚಾಸಾ.5 ರವರ ಪರಿಚಯವಿದೆ. ಆರೋಪಿತರ ಪರಿಚಯವಿದೆ. ಆರೋಪಿತರು ನನ್ನ ಪಕ್ಕದ ಮನೆಯವರು. ಚಾಸಾ.5 ಮತ್ತು ಆರೋಪಿತರ ಮಧ್ಯೆ ಆಗಾಗ ಜಗಳವಾಗುತ್ತಿದ್ದು, ಅವರಿಬ್ಬರಿಗೂ ನಾನು ಹೊಂದಾಣಿಕೆ ಮಾಡಿಕೊಂಡು ಹೋಗಿ ಎಂದು ತಿಳಿಸಿರುತ್ತೇನೆ. ಸದರಿ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಯಾವುದೇ ಗಲಾಟೆಯನ್ನು ಕಣ್ಣಾರೆ ನೋಡಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎ.ಪಿ.ಪಿ ಯವರು ಕೋರಿದ್ದು, ಸಂಗತಿಗಳನ್ನು ಪರೀಶಿಲಿಸಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟಿ ಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲು ಶ್ರೀ ಎ.ಪಿ.ಪಿ. ಯವರಿಂದಃ**

ದಿನಾಂಕ 29.04.2021 ರಂದು 1 ನೇ ಆರೋಪಿ ಮತ್ತು ಚಾಸಾ.5 ರವರ ಮಧ್ಯೆ ವಿವಾಹವಾಗಿದ್ದು, ವಿವಾಹದ ಸಮಯದಲ್ಲಿ ಒಂದು ತೊಲದ ಬಂಗಾರದ ಸರವನ್ನು ಕೊಟ್ಟಿರುತ್ತಾರೆ ಎಂಬ ಮಾಹಿತಿ ನನಗೆ ಗೊತ್ತಿರುತ್ತದೆ ಎಂದರೆ ಸರಿಯಲ್ಲ. ನಂತರ ಆರೋಪಿತರು ಚಾಸಾ.5 ರವರಿಗೆ ಚೆನ್ನಾಗಿ ನೋಡಿಕೊಳ್ಳುತ್ತಿದ್ದು, ನಂತರ ವರದಕ್ಷಿಣೆ ವಿಚಾರವಾಗಿ ಮಾನಸಿಕ ಮತ್ತು ದೈಹಿಕ ಹಿಂಸೆ ನೀಡುತ್ತಿದ್ದರು ಎಂದರೆ ಸರಿಯಲ್ಲ. ದಿಃ04.05.2022 ರಂದು ಆರೋಪಿತರು ಚಾಸಾ.5 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಹೊಡೆದು, ಜಗಳ ತೆಗೆದು ಆಕೆಯ ಗಂಡ ಆಕೆಯನ್ನು ಕೈ ಕಾಲುಗಳಿಂದ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ನಂತರ ಚಾಸಾ.5 ರವರು ಯಾವುದೇ ಗುಳಿಗೆಗಳನ್ನು ನುಂಗಿದ್ದು, ಅನಿತಾಳ ಸಂಬಂಧಿಯಾದ ಚಾಸಾ.11 ರವರು ಹರಿಹರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ-15 ಎಂದು ಗುರುತಿಸಲಾಯಿತು. ಎಲ್ಲಾ ಮಾಹಿತಿ ಗೊತ್ತಿದ್ದರೂ ಸಹ ಆರೋಪಿತರಿಗೆ ಅನುಕೂಲವಾಗಲೀ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯಲ್ಲಿ ಚಾಸಾ.5 ಮತ್ತು ಆರೋಪಿತರ ಮಧ್ಯೆ ಆಗಾಗ ಜಗಳವಾಗುತ್ತಿತ್ತು ಎಂದು ಹೇಳಿದ್ದು, ಚಾಸಾ.5 ರವರು 1 ನೇ ಆರೋಪಿಗೆ ಬೇರೆ ಮನೆ ಮಾಡುವಂತೆ ಜಗಳ ಮಾಡುತ್ತಿದ್ದರು ಎಂದು ನುಡಿಯುತ್ತಾರೆ. ಚಾಸಾ.5 ಮತ್ತು 1 ನೇ ಆರೋಪಿ ಮಧ್ಯೆ ಆಗುತ್ತಿದ್ದ ಜಗಳವನ್ನು ಸರಿಪಡಿಸಲು ಸಾಕಷ್ಟು ಬಾರಿ ಪ್ರಯತ್ನಿಸುತ್ತಿದ್ದು ಚಾಸಾ.5 ರವರು ಒಪ್ಪುತ್ತಿರಲಿಲ್ಲ. ಸದರಿ ವಿಚಾರವನ್ನು ಹೊರತುಪಡಿಸಿ ಬೇರೆ ಯಾವುದೇ ಕಾರಣಕ್ಕಾಗಿ ಅವರ ಮಧ್ಯೆ ಜಗಳಗಳು ಆಗಿರುವುದಿಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

2 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ,
ಹರಿಹರ